ಟೆಂಡರ್ ಕರೆದಾಗಲೂ ಗುತ್ತಿಗೆದಾರರು ದೊರಕಲಿಲ್ಲ. ಇತ್ತೀಚೆಗೆ ಮತ್ತೆ ಟೆಂಡರ್ ಕರೆದು ಗುತ್ತಿಗೆದಾರರನ್ನು ನಿಗಧಿಪಡಿಸಲಾಗಿದೆ. ಶೀಘ್ರವಾಗಿ ಕಾಮಗಾರಿ ಪ್ರಾರಂಭಿಸಲಾಗುವುದು.

ಆ) ಗುತ್ತಿಗೆದಾರರು ಈ ಮಾಹೆಯಲ್ಲಿ ಕೆಲಸ ಪ್ರಾರಂಭಿಸಿ ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು.

ವಿಷಯ: ಮಾಗಡಿಯಲ್ಲಿ ಸುಸಜ್ಜಿತ ನ್ಯಾಯಾಲಯ ಕುರಿತು.

2730 (4036)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನಲ್ಲಿ ಸುಸಜ್ಜಿತ ನ್ಯಾಯಾಲಯ ಕಟ್ಟಡದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಸುಸಜ್ಜಿತ ನ್ಯಾಯಾಲಯ ಕಟ್ಟಡವನ್ನು ಕಟ್ಟಲು ಸರ್ಕಾರವು ಉದ್ದೇಶಿಸಿದೆಯೇ, ಇದ್ದಲ್ಲಿ ಈ ನ್ಯಾಯಾಲಯವನ್ನು ಎಲ್ಲಿ ನಿರ್ಮಿಸಲಾಗುವುದು?

ಇ) ಈ ಕಟ್ಟಡದ ಅಂದಾಜು ಮೊತ್ತವೆಷ್ಟು, ಈ ಕಾಮಗಾರಿ ಯಾವಾಗ ಆರಂಭಿಸಲಾಗುವುದು?

ಶ್ರೀ ಯಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು):

ಅ) ಹೌದು.

ಆ) ಹೌದು. ಮಾಗಡಿಯ ನ್ಯಾಯಾಲಯ ಕಟ್ಟಡ ಮತ್ತು ನ್ಯಾಯಾಧೀಶರ ವಸತಿ ಗೃಹ ನಿರ್ಮಿಸಲು ಸೂಕ್ತ ಸ್ಥಳವನ್ನು ಆಯ್ಕೆ ಮಾಡಲಾಗಿದೆ. ಸದರಿ ಸ್ಥಳದ ಭೂಸ್ವಾಧೀನ ನಡವಳಿಕೆಯು ಪ್ರಗತಿಯಲ್ಲಿದೆ.

ಇ) ಸ್ಥಳದ ಸುಬರ್ದಿಯನ್ನು ಪಡೆದ ನಂತರ ನಕ್ಷೆ ಮತ್ತು ಅಂದಾಜು ಪಟ್ಟಿಯನ್ನು ತಯಾರಿಸಿ ಹಣಕಾಸು ಇಲಾಖೆಯ ಮಂಜೂರಾತಿಯನ್ನು ಪಡೆದು ಕೆಲಸ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗುವುದು.

ವಿಷಯ: ಮಾಗಡಿ ತಾಲ್ಲೂಕಿನ ರಾಜ್ಯ ಹೆದ್ದಾರಿಗಳ ದುರಸ್ತಿ